ಅ) *ಶಿವಮೊಗ್ಗ ಬಸ್‌ನಿಲ್ದಾಣದ ನಿರ್ಮಾಣ ಕಾರ್ಯ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?*

ಆ) *ಬಸ್‌ನಿಲ್ದಾಣದಲ್ಲಿ ನಿರ್ಮಾಣವನ್ನು ಯಾವಾಗ ಮುಕ್ತಾಯ ಮಾಡಲಾಗುವುದು?*

ಶ್ರೀ ಅಜೀಜ್ ಸೇಠ್ (ಸಾರಿಗೆ ಸಚಿವರು) :

ಅ) ನಿಂತಿಲ್ಲ, ಕೆಲಸ ಪ್ರಗತಿಯಲ್ಲಿದೆ

ಆ) 1991ನೇ ಮಾರ್ಚ್ 31 ರೊಳಗಾಗಿ ಮುಗಿಸಲು ಸರ್ವಪ್ರಯತ್ನ ಮಾಡಲಾಗುವುದು.

ಶಿವಮೊಗ್ಗದಲ್ಲಿ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್

1164 - ಶ್ರೀ ಕೆ.ಎಸ್. ಈಶ್ವರಪ್ಪ (ಶಿವಮೊಗ್ಗ) : ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಶಿವಮೊಗ್ಗದಲ್ಲಿ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ವಿಶ್ವ ಅನುದಾನ ಯೋಜನೆಯಿಂದ ಹಣ ಮಂಜೂರು ಆಗಿದೆಯೇ?*

ಆ) *ಶಿವಮೊಗ್ಗದ ಯಾವ ಪ್ರದೇಶದಲ್ಲಿ ಈ ಯೋಜನೆಗೆ ಸ್ಥಳ ತೀರ್ಮಾನ ಮಾಡಲಾಗಿದೆ?*

ಇ) *ಯಾವಾಗ ಪ್ರಾರಂಭಿಸಲಾಗುವುದು ಮತ್ತು ಯಾವಾಗ ಮುಕ್ತಾಯವಾಗುವುದು?*

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ಸಚಿವರು)

ಅ) ಮಂಜೂರಾಗಿದೆ.

ಆ) ಸದರಿ ಪಾಲಿಟೆಕ್ನಿಕ್‌ನ್ನು ಶಿವಮೊಗ್ಗ ನಗರದ ಕಲ್ಲಹಳ್ಳಿ ಗ್ರಾಮದ ಸರ್ವೆ ನಂ. 6 ರಲ್ಲಿ ಪ್ರಾರಂಭಿಸಲು ಉದ್ದೇಶಿಸಲಾಗಿದೆ.

ಇ) ಸದರಿ ಪಾಲಿಟೆಕ್ನಿಕ್‌ನ್ನು 1991-92 ನೇ ಸಾಲಿನಿಂದ ಪ್ರಾರಂಭಿಸಲು ಮತ್ತು ಪಾಲಿಟೆಕ್ನಿಕ್‌ನ ಅಭಿವೃದ್ಧಿ ಕಾರ್ಯಗಳನ್ನು 5 ವರ್ಷಗಳಲ್ಲಿ ಮುಕ್ತಾಯಗೊಳಿಸಲು ಉದ್ದೇಶಿಸಲಾಗಿದೆ.

ಅನುತ್ತೀರ್ಣರಾದ ವಿದ್ಯಾರ್ಥಿಗಳ ಪುನಃ ಪ್ರವೇಶ ಕುರಿತು

721 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *8 ಮತ್ತು 9ನೇ ತರಗತಿಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳನ್ನು ಶಾಲೆಗೆ ಪುನಹ ಪ್ರವೇಶಕ್ಕೆ ಅವಕಾಶ ಕೊಡದೆ ಕಡೆಗಣಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಬಂದಿದ್ದಲ್ಲಿ ಈ ಬಗ್ಗೆ ಸರಕಾರ ಕೈಗೊಂಡ ಕ್ರಮವೇನು?*

ಇ) *ಬಾರದಿದ್ದಲ್ಲಿ ಈ ಬಗ್ಗೆ ಸರಕಾರ ಕೈಗೊಳ್ಳುವ ಕ್ರಮವೇನು?*

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು) :

ಅ) ಗಮನಕ್ಕೆ ಬಂದಿರುವುದಿಲ್ಲ

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ನಿರ್ದಿಷ್ಟ ಪ್ರಕರಣ ಗಮನಕ್ಕೆ ಬಂದರೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು.